<u>All India Radio: Bangalore</u>

<u>National Bulletin In Kannada</u>

<u>ಆಕಾಶವಾಣಿ, ಬೆಂಗಳೂರು</u>

<u>ರಾಷ್ಟ್ರೀಯ ವಾರ್ತೆಗಳು</u>

19.06.2026 19.35 hrs

<>><><*><><<>

ಮುಖ್ಯಾಂಶಗಳು

- ಪಿಎಂ ವಿಕಸಿತ ಭಾರತ ಉದ್ಯೋಗ ಯೋಜನೆ; ಪ್ರಧಾನಿ ನರೇಂದ್ರ ಮೋದಿ ಅವರಿಂದ ೨ ಸಾವಿರದ ೪೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಪ್ರೋತ್ಸಾಹ ಧನ ಬಿಡುಗಡೆ

- ಭಾರತದ ರಕ್ಷಣಾ ಉತ್ಪಾದನೆ ದಾಖಲೆಯ ೧ ಲಕ್ಷದ ೭೮ ಸಾವಿರ ಕೋಟಿ ರೂಪಾಯಿಗೆ ಏರಿಕೆ- ರಕ್ಷಣಾ ಸಚಿವ ರಾಜನಾಥ್ ಸಿಂಗ್

- ನೀಟ್-ಯುಜಿ ಮರುಪರೀಕ್ಷೆ; ಟೆಲಿಗ್ರಾಂ ನಿರ್ಬಂಧಿಸುವ ಕೇಂದ್ರ ಸರ್ಕಾರದ ಆದೇಶ ಎತ್ತಿಹಿಡಿದ ದೆಹಲಿ ಉಚ್ಚನ್ಯಾಯಾಲಯ

- ಮಕಾವ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿ; ಮಹಿಳಾ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್ ಪ್ರವೇಶಿಸಿದ ಭಾರತದ ಅಶ್ಮಿತಾ ಚಲಿಹಾ

<>><><*><><<>

ನವದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 'ಪ್ರಧಾನ ಮಂತ್ರಿ ವಿಕಸಿತ ಭಾರತ ಉದ್ಯೋಗ ಯೋಜನೆ'- ಪಿಎಂ-ವಿಬಿಆರ್‌ವೈ ಅಡಿಯಲ್ಲಿ ೨ ಸಾವಿರದ ೪೦೦ ಕೋಟಿ ರೂಪಾಯಿಗಳ ಪ್ರೋತ್ಸಾಹಧನವನ್ನು ಇಂದು ಬಿಡುಗಡೆ ಮಾಡಿದರು. ದೇಶಾದ್ಯಂತ ಉದ್ಯೋಗ ಸೃಷ್ಟಿ ಮತ್ತು ಸಾಮಾಜಿಕ ಭದ್ರತೆ ವಿಸ್ತರಿಸುವ ಉದ್ದೇಶದ ಈ ಯೋಜನೆಯು ಪ್ರಸ್ತುತ ೧೫ ಲಕ್ಷ ಹೊಸ ಉದ್ಯೋಗಾವಕಾಶಗಳಿಗೆ ಬೆಂಬಲ ನೀಡಿದೆ. ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ, ೨೧ನೇ ಶತಮಾನದಲ್ಲಿ ಕೌಶಲ್ಯಯುತ ಯುವಶಕ್ತಿ, ನಾವೀನ್ಯತೆ ಹಾಗೂ ಗುಣಮಟ್ಟಕ್ಕೆ ಆದ್ಯತೆ ನೀಡುವ ರಾಷ್ಟ್ರಗಳು ಜಾಗತಿಕವಾಗಿ ಮುಂಚೂಣಿಯಲ್ಲಿರಲಿವೆ ಮತ್ತು ಭಾರತವು ಈ ನಿಟ್ಟಿನಲ್ಲಿ ಮುನ್ನಡೆಸಲು ಸಿದ್ಧವಾಗಿದೆ ಎಂದರು. ಈ ಯೋಜನೆಯು, ಮೊದಲ ಬಾರಿಗೆ ಉದ್ಯೋಗಕ್ಕೆ ಸೇರುವ ಯುವಕರು ಹಾಗೂ ಕೈಗಾರಿಕಾ ವಲಯದ ನಡುವೆ ಸೇತುವೆಯಾಗಿ ಕೆಲಸ ಮಾಡಲಿದೆ. ಯೋಜನೆಯಡಿ, ಇದುವರೆಗೆ ಸುಮಾರು ೭೦ ಲಕ್ಷ ಉದ್ಯೋಗಗಳು ಸೃಷ್ಟಿಯಾಗಿದ್ದು, ಈಗಾಗಲೇ ೨೦ ಲಕ್ಷ ಯುವಕರು ತಮ್ಮ ಹೊಸ ಉದ್ಯೋಗದಲ್ಲಿ ಯಶಸ್ವಿಯಾಗಿ ಆರು ತಿಂಗಳು ಪೂರೈಸಿದ್ದಾರೆ. ಇವರಲ್ಲಿ ೧೦ ಲಕ್ಷ ಫಲಾನುಭವಿಗಳಿಗೆ ಸುಮಾರು ೨ ಸಾವಿರ ಕೋಟಿ ರೂಪಾಯಿಗಳನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗಿದೆ ಎಂದು ಪ್ರಧಾನಿ ಮಾಹಿತಿ ನೀಡಿದರು. ಈ ಯೋಜನೆಯಡಿ, ಮೊದಲ ಬಾರಿಗೆ ಉದ್ಯೋಗ ಮಾರುಕಟ್ಟೆ ಪ್ರವೇಶಿಸುವ ಯುವಕರಿಗೆ ೧೫ ಸಾವಿರ ರೂಪಾಯಿಗಳವರೆಗೆ ಪ್ರೋತ್ಸಾಹಧನ ಸಿಗಲಿದ್ದರೆ, ಹೆಚ್ಚುವರಿ ಉದ್ಯೋಗ ಸೃಷ್ಟಿಸುವ ಉದ್ಯೋಗದಾತರಿಗೆ ಪ್ರತಿ ಹೆಚ್ಚುವರಿ ಉದ್ಯೋಗಿಗೆ ತಿಂಗಳಿಗೆ ೩ ಸಾವಿರ ರೂಪಾಯಿಗಳವರೆಗೆ ಪ್ರೋತ್ಸಾಹಧನ ನೀಡಲಾಗುತ್ತದೆ. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ, ವಿಜ್ಞಾನ ಭವನದಲ್ಲಿ ಯುವಕರೊಂದಿಗೆ ಸಂವಾದ ನಡೆಸಿದರು.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಪಶ್ಚಿಮಬಂಗಾಳದ ಹೂಗ್ಲಿ ಜಿಲ್ಲೆಯ ತಾರಕೇಶ್ವರದಲ್ಲಿ 'ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ'ಯ ೨೩ನೇ ಕಂತಿನ ಹಣ ಬಿಡುಗಡೆ ಮಾಡಲಿದ್ದಾರೆ. ದೇಶಾದ್ಯಂತ ೯ ಕೋಟಿ ೪೪ ಲಕ್ಷಕ್ಕೂ ಹೆಚ್ಚು ರೈತರ ಬ್ಯಾಂಕ್ ಖಾತೆಗಳಿಗೆ ೧೮ ಸಾವಿರ ೮೮೦ ಕೋಟಿ ರೂಪಾಯಿಗಳನ್ನು ನೇರವಾಗಿ ವರ್ಗಾಯಿಸಲಾಗುವುದು. ೨ ಕೋಟಿ ೧೮ ಲಕ್ಷಕ್ಕೂ ಹೆಚ್ಚು ಮಹಿಳಾ ರೈತರು ಈ ಕಂತಿನ ಪ್ರಯೋಜನ ಪಡೆಯುತ್ತಾರೆ. ೨೩ನೇ ಕಂತಿನ ಬಿಡುಗಡೆಯೊಂದಿಗೆ, ೨೦೧೯ರ ಫೆಬ್ರವರಿಯಿಂದ ಪ್ರಾರಂಭವಾದಾಗಿನಿಂದ ಪಿಎಂ-ಕಿಸಾನ್ ಯೋಜನೆಯಡಿಯಲ್ಲಿ ಒಟ್ಟು ವಿತರಣೆ ೪ ಲಕ್ಷ ೪೬ ಸಾವಿರ ಕೋಟಿ ರೂಪಾಯಿಗಳನ್ನು ಮೀರುತ್ತದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ.

<>><><*><><<>

೨೦೧೪ರಲ್ಲಿ ೪೬ ಸಾವಿರ ಕೋಟಿ ರೂಪಾಯಿಗಳಿದ್ದ ದೇಶೀಯ ರಕ್ಷಣಾ ಉತ್ಪಾದನೆ, ಕಳೆದ ಹಣಕಾಸು ವರ್ಷದಲ್ಲಿ ದಾಖಲೆಯ ೧ ಲಕ್ಷದ ೭೮ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನಾಗಪುರದ ಅಂಬಾಜರಿಯಲ್ಲಿರುವ ಯಂತ್ರ ಇಂಡಿಯಾ ಲಿಮಿಟೆಡ್‌ನ ಆರ್ಡ್‌ನೆನ್ಸ್ ಕಾರ್ಖಾನೆಯಲ್ಲಿ

ಇಂದು ಅತ್ಯಾಧುನಿಕ ೧೦ ಸಾವಿರ ಟನ್ ಸಾಮರ್ಥ್ಯದ ಅಲ್ಯೂಮಿನಿಯಂ ಎಕ್ಸ್‌ಟ್ರೂಷನ್ ಪ್ರೆಸ್ ಘಟಕದ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ೨೦೧೪ರ ಮೊದಲು ಕೇವಲ ೧ ಸಾವಿರ ಕೋಟಿ ರೂಪಾಯಿಗಳಷ್ಟಿದ್ದ ರಕ್ಷಣಾ ರಫ್ತು, ಸ್ವದೇಶಿ ನಿರ್ಮಿತ ಭಾರತೀಯ ರಕ್ಷಣಾ ಉಪಕರಣಗಳಿಗೆ ಜಾಗತಿಕ ಮಟ್ಟದಲ್ಲಿ ಹೆಚ್ಚುತ್ತಿರುವ ಬೇಡಿಕೆಯಿಂದಾಗಿ ಇದೀಗ ಸುಮಾರು ೪೦ ಸಾವಿರ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ ಎಂದು ಅವರು ತಿಳಿಸಿದ್ದಾರೆ. ಪ್ರಸ್ತಾವಿತ ಅಲ್ಯೂಮಿನಿಯಂ ಎಕ್ಸ್‌ಟ್ರೂಷನ್ ಪ್ರೆಸ್ ಮೂಲಕ ತಯಾರಾಗುವ ಘಟಕಗಳು, ಕೇವಲ ರಕ್ಷಣಾ ಉಪಕರಣಗಳಿಗೆ ಮಾತ್ರವಲ್ಲದೆ, ರೈಲ್ವೆ, ಇಸ್ರೋ ಮತ್ತು ಡಿಆರ್‌ಡಿಒ ಸೇರಿದಂತೆ ವಿವಿಧ ಸಂಸ್ಥೆಗಳು ಬಳಸುವ ಯಂತ್ರೋಪಕರಣಗಳಲ್ಲಿಯೂ ಉಪಯೋಗವಾಗಲಿವೆ ಎಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹಾಗೂ ರಕ್ಷಣಾ ಉತ್ಪಾದನಾ ಇಲಾಖೆಯ ಕಾರ್ಯದರ್ಶಿ ಸಂಜೀವ್ ಕುಮಾರ್ ಉಪಸ್ಥಿತರಿದ್ದರು.

<>><><*><><<>

ಇಡೀ ಜಗತ್ತು ಇಂದು ಭಾರತದೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಳ್ಳುತ್ತಿದ್ದು, ದೇಶದಲ್ಲಿ ದೊಡ್ಡಮಟ್ಟದ ಹೂಡಿಕೆಗಳನ್ನು ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಮೈ ಜಿಒವಿ ಇಂಡಿಯಾ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಉತ್ತಮ ಸುಸ್ಥಿರ ಜಗತ್ತಿನ ನಿರ್ಮಾಣಕ್ಕಾಗಿ ಸಾಧ್ಯವಿರುವ ಎಲ್ಲಾ ರೀತಿಯ ಕೊಡುಗೆಗಳನ್ನು ನೀಡಲು ಭಾರತ ಯಾವಾಗಲೂ ಸನ್ನದ್ಧವಾಗಿದೆ ಎಂದಿದ್ದಾರೆ. ಜಾಗತಿಕಮಟ್ಟದಲ್ಲಿ ಭಾರತ ಪ್ರಭಾವ ಮತ್ತು ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಲು ಪ್ರಮುಖ ಪಾತ್ರ ವಹಿಸಿರುವ ದೇಶದ ಸಮಸ್ತ ನಾಗರಿಕರಿಗೆ ಪ್ರಧಾನಿ ಧನ್ಯವಾದ ಅರ್ಪಿಸಿದ್ದಾರೆ.

<>><><*><><<>

ದೇಶಾದ್ಯಂತ ಇದೇ ೨೧ ರಂದು ನಡೆಯಲಿರುವ ನೀಟ್-ಯುಜಿ ಮರುಪರೀಕ್ಷೆಯ ಮುನ್ನಾದಿನದಂದು ಟೆಲಿಗ್ರಾಮ್ ಆಪ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿದ ಕೇಂದ್ರ ಸರ್ಕಾರದ ಆದೇಶವನ್ನು ಇಂದು ದೆಹಲಿ ಉಚ್ಚನ್ಯಾಯಾಲಯ ಎತ್ತಿಹಿಡಿದಿದೆ. ಬೃಹತ್ ಪ್ರಮಾಣದ ಮಾಹಿತಿಯನ್ನು ಸ್ವಯಂಚಾಲಿತವಾಗಿ ಹರಡಲು ಈ ಆಪ್ ಅನುವು ಮಾಡಿಕೊಡುವುದರಿಂದ, ಪರೀಕ್ಷಾ ಅಕ್ರಮ ತಡೆಯಲು ಸರ್ಕಾರ ಕೈಗೊಂಡಿರುವ ಈ ಮುನ್ನೆಚ್ಚರಿಕೆ ಕ್ರಮ ಸೂಕ್ತವಾಗಿದೆ ಎಂದು ನ್ಯಾಯಾಲಯ ತಿಳಿಸಿದೆ. ನ್ಯಾಯಮೂರ್ತಿ ತೇಜಸ್ ಕರಿಯಾ ಅವರಿದ್ದ ರಜೆಕಾಲದ ಪೀಠ, ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ, ಕೇಂದ್ರ ಸರ್ಕಾರ ಕಾನೂನುಬದ್ಧವಾಗಿಯೇ ಈ ಕ್ರಮ ಕೈಗೊಂಡಿದೆ ಎಂದು ತಿಳಿಸಿದೆ.

<>><><*><><<>

ಮಹಿಳಾ ವಕೀಲರು ತಮ್ಮ ವೃತ್ತಿಪರ ಜವಾಬ್ದಾರಿಗಳನ್ನು ಪರಿಣಾಮಕಾರಿಯಾಗಿ ಮತ್ತು ಸಮಾನವಾಗಿ ನಿರ್ವಹಿಸಲು ಪೂರಕ ವಾತಾವರಣ ನಿರ್ಮಿಸುವುದು ಅತ್ಯಗತ್ಯ ಎಂದು ಸುಪ್ರೀಂ ಕೋರ್ಟ್ ತಿಳಿಸಿದೆ. ದೇಶದ ಬಹುತೇಕ ನ್ಯಾಯಾಲಯ ಹಾಗೂ ನ್ಯಾಯಾಧಿಕರಣಗಳಲ್ಲಿ ಮಹಿಳಾ ವಕೀಲರಿಗಾಗಿ ಅಗತ್ಯ ಮೂಲಸೌಕರ್ಯಗಳ ಕೊರತೆ ಇರುವುದನ್ನು ಆಕ್ಷೇಪಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ಹಿನ್ನೆಲೆಯಲ್ಲಿ, ಸರ್ವೋಚ್ಚ ನ್ಯಾಯಾಲಯವು ಕೇಂದ್ರ ಸರ್ಕಾರ ಹಾಗೂ ಎಲ್ಲಾ ರಾಜ್ಯಗಳಿಗೆ ನೋಟಿಸ್ ಜಾರಿ ಮಾಡಿ ಪ್ರತಿಕ್ರಿಯೆ ಕೇಳಿದೆ.

<>><><*><><<>

ಪಾದಚಾರಿ ಮಾರ್ಗದಲ್ಲಿ ಸುರಕ್ಷಿತವಾಗಿ ನಡೆಯುವುದು ನಾಗರಿಕರ ಮೂಲಭೂತ ಹಕ್ಕಾಗಿದೆ ಎಂದು ಸುಪ್ರೀಂ ಕೋರ್ಟ್ ಇಂದು ಮಹತ್ವದ ತೀರ್ಪು ನೀಡಿದೆ. ನ್ಯಾಯಮೂರ್ತಿಗಳಾದ ಪಿ.ಎಸ್.ನರಸಿಂಹ ಮತ್ತು ಎ.ಎಸ್. ಚಂದುರ್ಕರ್ ಅವರನ್ನೊಳಗೊಂಡ ಪೀಠವು, ಗುರುತಿಸಲಾದ ಪಾದಚಾರಿ ಮಾರ್ಗದಲ್ಲಿ ನಡೆಯುವ ನಾಗರಿಕರ ಹಕ್ಕು ಪ್ರಾಥಮಿಕವಾಗಿದ್ದು, ಅದು ಮೋಟಾರು ವಾಹನಗಳ ಸಂಚಾರಕ್ಕಿಂತ ಹೆಚ್ಚಿನ ಆದ್ಯತೆ ಹೊಂದಿದೆ ಎಂದು ಸ್ಪಷ್ಟಪಡಿಸಿದೆ. ತಂದೆಯೊಬ್ಬರು ತಮ್ಮ ಐದು ವರ್ಷದ ಮಗುವನ್ನು ಶಾಲೆಗೆ ಕರೆದೊಯ್ಯುವ ವೇಳೆ ಸಂಭವಿಸಿದ ದುರ್ಘಟನೆಯಲ್ಲಿ ಮಗುವನ್ನು ಕಳೆದುಕೊಂಡ ಮೋಟಾರು ಅಪಘಾತ ಪರಿಹಾರ ಪ್ರಕರಣದ ವಿಚಾರಣೆ ವೇಳೆ ನ್ಯಾಯಾಲಯ ಈ ಮಹತ್ವದ ಘೋಷಣೆ ಮಾಡಿದೆ.

<>><><*><><<>

ಕೇಂದ್ರ ಸರ್ಕಾರದ ೧೨ ವರ್ಷಗಳ ಆಡಳಿತಾತ್ಮಕ ಸಾಧನೆಗಳ ಅಂಗವಾಗಿ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಗುರ್ನೀತ್ ತೇಜ್ ಬೆಂಗಳೂರಿನಲ್ಲಿ 'ಭವ್ಯ' ಯೋಜನೆಯ ಕುರಿತಂತೆ ಪ್ರಾದೇಶಿಕ ಸುದ್ದಿಗೋಷ್ಠಿ ನಡೆಸಿದರು. ಮುಂದಿನ ಆರು ವರ್ಷಗಳಲ್ಲಿ ದೇಶಾದ್ಯಂತ ೧೦೦ ವಿಶ್ವದರ್ಜೆಯ ಕೈಗಾರಿಕಾ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸುವ ಗುರಿಯನ್ನು ಈ ಯೋಜನೆ ಹೊಂದಿದ್ದು, ಮೊದಲ ಹಂತದಲ್ಲಿ ೫೦ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದರು. ಈ ಯೋಜನೆಗೆ ೧೦೦ ರಿಂದ ೫೦೦ ಎಕರೆ ಭೂಮಿ ಅಗತ್ಯವಿದ್ದು, ಅರ್ಜಿ ಹಂತದಲ್ಲೇ ಶೇಕಡಾ ೬೦ ರಷ್ಟು ಭೂಸ್ವಾಧೀನವಾಗಿರಬೇಕು ಎಂದು ತಿಳಿಸಿದರು. ರಾಜ್ಯಗಳಿಗೆ ಹೆಚ್ಚಿನ ಅಧಿಕಾರ

ಹಸ್ತಾಂತರ ಹಾಗೂ ಏಕಗವಾಕ್ಷಿ ಪದ್ಧತಿಯ ಮೂಲಕ ಉದ್ಯಮ ಸ್ನೇಹಿ ವಾತಾವರಣಕ್ಕೆ ಯೋಜನೆ ಉತ್ತೇಜನ ನೀಡಲಿದ್ದು, ಖಾಸಗಿ ಹೂಡಿಕೆದಾರರಿಗೆ ಪ್ರತಿ ಎಕರೆಗೆ ೫೦ ಲಕ್ಷ ರೂಪಾಯಿಯವರೆಗೆ ಆರ್ಥಿಕ ನೆರವು ಸಿಗಲಿದೆ ಎಂದು ಮಾಹಿತಿ ನೀಡಿದರು.

<>><><*><><<>

ವಿಶ್ವಸಂಸ್ಥೆಯ ಸಂವಾದದ ವೇಳೆ ಪಾಕಿಸ್ತಾನ ಮತ್ತು ಇಸ್ಲಾಮಿಕ್ ಸಹಕಾರ ಸಂಘಟನೆ, ಜಮ್ಮು-ಕಾಶ್ಮೀರ ವಿಷಯ ಪ್ರಸ್ತಾಪಿಸಿದ್ದಕ್ಕೆ ಭಾರತ ತೀವ್ರ ವಾಗ್ದಾಳಿ ನಡೆಸಿದೆ. ವಿಶ್ವಸಂಸ್ಥೆಯ ಭಾರತದ ಖಾಯಂ ಮಿಷನ್‌ನ ಪ್ರಥಮ ಕಾರ್ಯದರ್ಶಿ ಅನುಪಮಾ ಸಿಂಗ್ ಮಾತನಾಡಿ, ಭಯೋತ್ಪಾದಕರನ್ನು ಪೋಷಿಸುವ ಪಾಕಿಸ್ತಾನವು, ತನ್ನದೇ ಸೃಷ್ಟಿಗೆ ಬಲಿಯಾಗುತ್ತಿರುವ ದೇಶವಾಗಿದೆ ಎಂದು ಎಂದಿದ್ದಾರೆ. ಜಮ್ಮು-ಕಾಶ್ಮೀರವು ಭಾರತದ ಅವಿಭಾಜ್ಯ ಅಂಗವಾಗಿದ್ದು, ಪಾಕ್ ಆಕ್ರಮಿತ ಪ್ರದೇಶಗಳನ್ನು ಮುಕ್ತಗೊಳಿಸುವುದೊಂದೇ, ಬಾಕಿ ಇರುವ ಏಕೈಕ ಸಮಸ್ಯೆಯಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

<>><><*><><<>

ಚೀನಾದಲ್ಲಿ ನಡೆಯುತ್ತಿರುವ ಮಕಾವ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಅಶ್ಮಿತಾ ಚಲಿಹಾ, ಮಹಿಳಾ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್‌ಗೆ ಲಗ್ಗೆ ಇಟ್ಟಿದ್ದಾರೆ. ಇಂದು ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಕೊರಿಯಾದ ಕಿಮ್ ಮಿನ್ ಸುನ್ ವಿರುದ್ಧ ಭಾರತದ ಅಶ್ಮಿತಾ ೨೧-೧೬, ೨೧-೧೮ ನೇರ ಸೆಟ್‌ಗಳ ಅಂತರದಲ್ಲಿ ಗೆಲುವು ದಾಖಲಿಸಿದರು. ನಾಳೆ ನಡೆಯಲಿರುವ ಸೆಮಿಫೈನಲ್‌ನಲ್ಲಿ ಅವರು, ದಕ್ಷಿಣ ಕೊರಿಯಾದ ಪಾರ್ಕ್ ಗಾಯುನ್ ವಿರುದ್ಧ ಸೆಣಸಾಟ ನಡೆಸಲಿದ್ದಾರೆ. ಈ ನಡುವೆ, ಭಾರತದ ಅನ್ಮೋಲ್ ಖಾರ್ಬ್ ಕ್ವಾರ್ಟರ್ ಫೈನಲ್‌ನಲ್ಲಿ ಸೋಲನುಭವಿಸಿ ಟೂರ್ನಿಯಿಂದ ಹೊರಬಿದ್ದಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>